# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | **1088** |
| **ಸದಸ್ಯರ ಹೆಸರು** | : | **ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಉತ್ತರಿಸುವ ದಿನಾಂಕ** | : | **22.09.2022** |
| **ಉತ್ತರಿಸುವ ಸಚಿವರು** | : | **ಮಾನ್ಯ ಜಲಸಂಪನ್ಮೂಲ ಸಚಿವರು** |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊಟ್ಟೂರು ತಾಲ್ಲೂಕಿನ 17 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಯಾವ ಹಂತದಲ್ಲಿದೆ; ಈ ಯೋಜನೆಯು ವಿಳಂಬವಾಗುತ್ತಿರಲು ಕಾರಣಗಳೇನು; (ಮಾಹಿತಿ ನೀಡುವುದು) | ರೂ.85.00 ಕೋಟಿ ವೆಚ್ಚದಲ್ಲಿ ತುಂಗಭದ್ರಾ ಜಲಾಶಯದ ಹಿನ್ನೀರಿನಿಂದ ನೀರನ್ನು ಎತ್ತಿ ಕೊಟ್ಟೂರು ಮತ್ತು ಇತರೆ 11 ಕೆರೆಗಳನ್ನು ತುಂಬಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳುವ ಕುರಿತು 2019-20 ನೇ ಸಾಲಿನ ಆಯವ್ಯಯದ ಭಾಷಣದಲ್ಲಿ ಘೋಷಣೆಯಾಗಿರುತ್ತದೆ. |
| ಆ) | ಈ ಯೋಜನೆಯ ಬಗ್ಗೆ ದಿನಾಂಕ:08.11.2019ರ ಕರ್ನಾಟಕ ನೀರಾವರಿ ನಿಗಮದ ಇ.ಆರ್.ಸಿ. ಸಮಿತಿಯಲ್ಲಿ ಪಾಸ್ ಆಗಿದ್ದರೂ ಸಹ ಇಲ್ಲಿಯವರೆಗೆ ಬೋರ್ಡ್ ಸಭೆಯಲ್ಲಿ ಮಂಡಿಸಿ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣವೇನು: (ವಿವರಗಳನ್ನು ನೀಡುವುದು) | ತುಂಗಭದ್ರಾ ನದಿಯಿಂದ ಕೊಟ್ಟೂರು ಮತ್ತು ಇತರೆ 16 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ರೂ.379.00 ಕೋಟಿಗಳ ವಿವರವಾದ ಯೋಜನಾ ವರದಿಯನ್ನು (DPR) ಕರ್ನಾಟಕ ನೀರಾವರಿ ನಿಗಮದ ಅಂದಾಜುಗಳ ಸಮಿತಿ ಸಭೆಯಲ್ಲಿ ಮಂಡಿಸಿ, ತೀರುವಳಿ ಪಡೆಯಲಾಗಿರುತ್ತದೆ. ಸದರಿ ಪ್ರಸ್ತಾವನೆಯು ಕರ್ನಾಟಕ ನೀರಾವರಿ ನಿಗಮದ ಪರಿಶೀಲನೆಯಲ್ಲಿದ್ದು, ಅನುದಾನ ಲಭ್ಯತೆಗನುಸಾರ ಯೋಜನೆಯ ಕುರಿತು ನಿಯಮಾನುಸಾರ ಕ್ರಮ ವಹಿಸಲಾಗುವುದು. |
| ಇ) | ಈ ಕೆರೆ ತುಂಬಿಸುವ ಯೋಜನೆಯ ಪ್ರಕ್ರಿಯೆಗಳನ್ನು ಯಾವ ಕಾಲಮಿತಿಯಲ್ಲಿ ಮುಗಿಸಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು? (ವಿವರ ನೀಡುವುದು) | |

**ಜಸಂಇ 180 ಎಂಎಲ್ಎ 2022**

**(ಗೋವಿಂದ ಎಂ.ಕಾರಜೋಳ)**
ಜಲಸಂಪನ್ಮೂಲ ಸಚಿವರು